<u>ಅಸಲು ದಾವಾ ಸಂಖ್ಯೆ- **137/2024**</u>                    <u>ಪಿ.ಡಬ್ಲ್ಯೂ:-</u> **1**

ದಿನಾಂಕಃ **18.10.2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-</u>

ಹದ್ದುಬಸ್ತು ದಾಖಲೆಗಳು ಮೂಲ ಮಾಲೀಕರ ಬಳಿ ಇರುತ್ತದೆ ನಮ್ಮ ಬಳಿ ಇರುವುದಿಲ್ಲ ಆದ ಕಾರಣ ಹಾಜರುಪಡಿಸಲು ಆಗುವುದಿಲ್ಲ ಎಂದು ನುಡಿಯುತ್ತಾರೆ. ಮೂಲ ಮಾಲೀಕರು ಈ ಹಿಂದೆ ತಮ್ಮ ಬಳಿ ಇದೆ ಎಂದು ಹೇಳಿದ್ದರು ಈಗ ಕೇಳಲು ಹೋದರೆ ಎಲ್ಲಿಯೋ ಇಟ್ಟಿದ್ದೇವೆ ಸಿಗುತ್ತಿಲ್ಲ ಎಂದು ಹೇಳುತ್ತಿದ್ದಾರೆ ಎಂದು ನುಡಿಯುತ್ತಾರೆ. ಹದ್ದುಬಸ್ತು ದಾಖಲೆಯು ಸರ್ವೇ ಇಲಾಖೆಯಲ್ಲಿ ಸಿಗುವಂತ ದಾಖಲೆ ಎಂದರೆ ಸರಿ. ಸರ್ವೇ ಇಲಾಖೆಯಲ್ಲಿ ಅರ್ಜಿಯನ್ನು ಸಲ್ಲಿಸಿ ಪಡೆದುಕೊಳ್ಳಬಹುದು ಎಂದರೆ ಸರಿ. ಸರ್ವೇ ಇಲಾಖೆಯಲ್ಲಿ ಅರ್ಜಿ ಸಲ್ಲಿಸಿ ಸದರಿ ಹದ್ದುಬಸ್ತು ದಾಖಲೆಯನ್ನು ಪಡೆದುಕೊಂಡು ನ್ಯಾಯಾಲಯಕ್ಕೆ ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. ಸರ್ವೇ ಇಲಾಖೆಗೆ ಅರ್ಜಿ ಸಲ್ಲಿಸಿ ಸದರಿ ದಾಖಲಾತಿಗಳನ್ನು ಪಡೆದುಕೊಂಡು ನ್ಯಾಯಾಲಯಕ್ಕೆ ಹಾಜರುಪಡಿಸುತ್ತೇನೆ ಎಂದು ನುಡಿಯುತ್ತಾರೆ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.